ಮೈಸೂರು ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

ತಾರೀಖು 14ನೆ ಸೆಪ್ಟೆಂಬರ್ 1909.

1. ಕಂದಾಯದ ಬಾಕೀದಾರರಾದ ಜೋಡಿ ಚಾಮಲಾಪುರದ ಕೃಷ್ಣಪ್ಪ, ನಾರಣಪ್ಪನಿಂದ ಬರಬೇಕಾದ ಜಮ್ಮಿ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗಿರುವ ಸ್ಥಿರಸ್ವತ್ತು ಮೈಸೂರು ಡಿಸ್ಟ್ರಿಕ್ಟ್ ಎಡತೊರೆ ತಾಲ್ಲೂಕು ಜೋಡಿ ಚಾಮಲಾಪುರ ಗ್ರಾಮದಲ್ಲಿ 17—11—1909ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟಿದೆ.

ಹರಾಜು ಬೆ॥ 11 ಘಂಟೆಗೆ ಉಪಕ್ರಮಿಸಲ್ಪಡುತ್ತ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1908–09ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಶೀಲ್ ವೇರಿಗೆ, ರೂಪಾಯಿ 3,985—1—0 ಆಗಿರುತ್ತ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನ ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತೀ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಹ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫಿನವನಾಗಿ ಪ್ರನರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

6. ಹರಾಜು ಡೆಪ್ಯೂಟಿ ಕಮಿಷನರವರಿಂದಾಗಲಿ ಯಾ ಈ ಭಾಗದಲ್ಲಿ ಅಧಿಕಾರವನ್ನು ಹೊಂದಿದ ಇತರ ಅಧಿಕಾರಿಯಿಂದಾಗಲೆ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

7. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನ ಪೂರ್ತಿಯಾಗಿ ಪಾವತಿ ಮಾಡಿದಮೇಲೆ ಡೆಪ್ಯೂಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಪಾಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

8. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯೂಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾರ್ನೂನಿಂದ ವಿಧಿಸಲ್ಪಟ್ಟ ಕಾಯಿದೆಯಲ್ಲಿ ಮೇಲ್ಪಟ್ಟ ಅಧಿಕಾರಿಗಳಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು:—

9. ಪ್ರತಿ ಸವಾಲ್‌ದಾರನು 1909–10ನೆ ಸಾಮ್ಯ ಸಂವತ್ಸರದ ಕಂದಾಯ ಕೊಡಲು ಬದ್ಧನಾಗಿರಬೇಕು.

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ತಪ್ಶೀಲ್. ಕಟ್ಟಡಗಳು. ಹುಟ್ಟುವ ಹೆಸರು.	ಅಂದಾಜು ಕಿಮ್ಮತ್ತು.	ಜಮೀನು. ನಂಬರ್ ಅಥವಾ ಜಮೀನಿನ ಹೆಸರು	ಖುಷ್ಕಿ ತರೀ ಅಥವಾ ಬಾಗಾಯತು ಅಥವಾ ಪರಂಪೋಕು	ವಿಸ್ತೀರ್ಣ.	ಆಕಾರ.	ಅಂದಾಜು ಕಿಮ್ಮತ್ತು.	ಸರಕಾರಕ್ಕೆ ಸಾಲಿಯಾನಾ ಕೊಡಬೇಕಾದ ಜೋಡಿ ಜೋಡಿ ಬಗ್ಗು.	ಸರಕಾರಕ್ಕೆ ಬರಬೇಕಾದ ನೋಟೀಸ್ ಫೀ ವಗೈರೆ ಸಹಿತವಾದ ಬಾಕೀ ಮೊಬಲಗು.
ನಂಜನಗೂಡು	ಕಸಬಾ	ಜೋಡಿ ಚಾಮಲಾಪುರ	ಕೃಷ್ಣಪ್ಪ, ನಾರಣಪ್ಪ	...	...	ಪರಂಪೋಕು ...	ಎ. ಗುಂ. 40 33	ರೂ. ಆ. ಪೈ. 0 12 0			
						ಬಾಗಾಯಿತು ..	2 6	6 0 0			
						ಖುಷ್ಕಿ ...	400 2	267 12 0			
						ತರಿ ...	2 21	15 0 0			
							445 22	289 8 0	ರೂ. 4,000	ರೂ. ಪೈ. 1,120 4 8	ರೂ. ಪೈ. 3,985 1 0 ಇನಾಮಿ ತಾರೀಖಿನ ರಿಗೆ ಬಡ್ಡಿ ಸದಾ.

ಇದಕ್ಕೆ ಬೇರೀಜು—

ಪೂರ್ವಕ್ಕೆ —ಜೋಡಿ ಸುಬ್ಬಾಪಂಡಿತರ ಕೊಪ್ಪಲ್ ಗಡಿ ಮತ್ತು ತಿಪ್ಪೂರು ಗಡಿ.
ಪಶ್ಚಿಮಕ್ಕೆ —ಕಗ್ಗೆರೆ ಗಡಿ ಮತ್ತು ತಿಪ್ಪೂರು ಗಡಿ.
ದಕ್ಷಿಣಕ್ಕೆ —ಬನ್ನಿಕುಪ್ಪೆ ಗಡಿ ಮತ್ತು ಕಾವಳಹಳ್ಳ ಗಡಿ.
ಉತ್ತರಕ್ಕೆ —ತಿಪ್ಪೂರುಗಡಿ ಮತ್ತು ಜೋಡಿ ಸುಬ್ಬಾಪಂಡಿತರ ಕೊಪ್ಪಲು ಗಡಿ. ಈ ಮಧ್ಯೆ ಇರುವ ಜೋಡಿ ಚಾಮಲಾಪುರ ಗ್ರಾಮಪೂರ್ತಾ.

ಕೆ. ಚಾಂಡಿ,
ಅಫೀಷಿಯೇಟಿಂಗ್ ಡೆಪ್ಯೂಟಿ ಕಮಿಷನರ್.